## ***4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ಮೈಸೂರು***

**ಎಸ್‌ಸಿ. 386/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ ಸಂತೋಷ | | ಪ್ರಮಾಣ ಮಾಡಿಸಿದ ದಿನಾಂಕಃ |
| ತಂದೆ/ಗಂಡನ ಹೆಸರು | ಃ ನೀಲಕಂಠ | | 22.07.2025 |
| ವಯಸ್ಸು | ಃ 40 ವರ್ಷ | | |
| ವೃತ್ತಿ | ಃ ನಂಜುಂಡೇಶ್ವರ ದೇವಸ್ಥಾನದಲ್ಲಿ ಕಛೇರಿ ಕೆಲಸ | ಪ್ರಾ.ಸಾ. ಃ | 8 |
| ವಾಸಸ್ಥಳ | ಃ ನಂಜನಗೂಡು | ಚಾ.ಸಾ. ಃ | 4 |

**ಮುಖ್ಯ ವಿಚಾರಣೆ ಃ ಸರ್ಕಾರಿ ಅಭಿಯೋಜಕರಿಂದಃ**

ನಾನು ಈಗ ನೋಡುತ್ತಿರುವ ಸಹಿ ನನ್ನ ಸಹಿ ಇರತ್ತದೆ. ಸಾಕ್ಷಿದಾರರು ನೋಡಿ ಗುರುತಿಸಿದ ದಾಖಲೆ ಅಮಾನತ್ತು ಪಂಚನಾಮೆ ಇದ್ದು, ಅದನ್ನು ನಿಪಿ–*11* ಎಂದು ಸಾಕ್ಷಿಯ ಸಹಿಯನ್ನು ನಿಪಿ–*11*(ಎ) ಎಂದು ಗುರುತಿಸಲಾಯಿತು. ಈಗ್ಗೆ *4* ವರ್ಷಗಳ ಹಿಂದೆ ನಾನು ಪೊಲೀಸ್ ಠಾಣೆಗೆ ಹೋದಾಗ ನನ್ನ ಸಹಿ ಪಡೆದಿದ್ದರು. ಆದರೆ ಯಾವ ಕಾರಣಕ್ಕಾಗಿ ನನ್ನ ಸಹಿ ಪಡೆದುಕೊಂಡಿದ್ದರು ಎಂದು ನನಗೆ ಗೊತ್ತಿಲ್ಲ. ನಾನು ಈ ಹಿಂದೆ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿತನನ್ನು ನೋಡಿರುವುದಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಕಾರನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

***ಈ ಹಂತದಲ್ಲಿ, ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.***

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-</u>

ದಿನಾಂಕ 04.11.2019 ರಂದು ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿ ಕಾರ್ ನಂಬರ್ ಕೆಎ–41–ಎಂಸಿ–4591 ಅನ್ನು ಪೊಲೀಸ್ ಠಾಣೆಯಲ್ಲಿ ಹಾಜರುಪಡಿಸಿದ್ದು ಪೊಲೀಸರು ನನ್ನ ಮತ್ತು ವಾಸಿಂ ರವರ ಸಮಕ್ಷಮ ಅಮಾನತ್ತು ಪಡಿಸಿಕೊಂಡು ನಿಪಿ–11 ಅನ್ನು ಓದಿ ಹೇಳಿ ನನ್ನ ಸಹಿ ತೆಗೆದುಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃ ಆರೋಪಿ ಪರ ವಕೀಲರವರಿಂದಃ-</u>

**ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

<u>ಮರು ವಿಚಾರಣೆಃ- ಇಲ್ಲ.</u>

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

*ಓ ಹೇ ಕೇ ಸ ಇ ಎ ಒ.,*

*4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,*
ಮೈಸೂರು